ಸಾಕ್ಷಿಗೆ ಕ್ರಮಬದ್ಧವಾಗಿ ಪ್ರಮಾಣ ವಚನವನ್ನು ಬೋಧಿಸಲಾಯಿತು.

ಮುಖ್ಯ ವಿಚಾರಣೆ ವಾದಿ ಪರ ಶ್ರೀ ಎಂ ಎಂ ವಕೀಲರಿಂದಃ-

ನಾನು ಈಗ ಹಾಜರುಪಡಿಸಿದ ಪ್ರಮಾಣ ಪತ್ರವನ್ನು ನನ್ನ ಮುಖ್ಯ ವಿಚಾರಣೆಯನ್ನಾಗಿ ಪರಿಗಣಿಸಲು ಕೋರುತ್ತೇನೆ. ಪ್ರಮಾಣ ಪತ್ರದಲ್ಲಿನ ಎಲ್ಲಾ ಅಂಶಗಳು ಸತ್ಯವಾಗಿವೆ ಮತ್ತು ಅದರಲ್ಲಿ ನನ್ನ ಸಹಿ ಇರುತ್ತದೆ ಎಂದು ಪ್ರಮಾಣೀಕರಿಸುತ್ತೇನೆ.

ದಿನಾಂಕಃ16.12.2020 ರಂದು ಆದ ಶುದ್ಧ ಕ್ರಯದ ಕರಾರು ಪತ್ರದ ಮೂಲ ಪ್ರತಿಯನ್ನು ಹಾಜರು ಮಾಡಿದ್ದು ಅದನ್ನು ನಿಪಿ-1 ಎಂದು, ಸಾಕ್ಷಿಯು ನಿಪಿ-1 ರ ಎಲ್ಲಾ ಪುಟದಲ್ಲಿ ಇರುವ ತಮ್ಮ ಸಹಿಯನ್ನು ನೋಡಿ ಗುರುತಿಸಿದ್ದು ಕೊನೆಯ ಪುಟದಲ್ಲಿ ಇರುವ ಸಾಕ್ಷಿಯ ಸಹಿಯನ್ನು ನಿಪಿ-1(ಎ) ಎಂದು, ತಮ್ಮ ಅಶೋಕ ರವರ ಸಹಿಯನ್ನು ನೋಡಿ ಗುರುತಿಸಿದ್ದು ಅದನ್ನು ನಿಪಿ-1(ಬಿ) ಎಂದು, ಸಾಕ್ಷಿಯು ಪ್ರತಿವಾದಿ ಲಕ್ಷ್ಮಮ್ಮನವರ ಸಹಿಯನ್ನು ನೋಡಿ ಗುರುತಿಸಿದ್ದು ಅದನ್ನು ನಿಪಿ-1(ಸಿ) ಎಂದು, ಪ್ರತಿವಾದಿ-6 ರವರ ಸಹಿಯನ್ನು ನೋಡಿ ಗುರುತಿಸಿದ್ದು ಅದನ್ನು ನಿಪಿ-1(ಡಿ) ಎಂದು, ಪ್ರತಿವಾದಿ-3 ರವರ ಸಹಿಯನ್ನು ನೋಡಿ ಗುರುತಿಸಿದ್ದು ಅದನ್ನು ನಿಪಿ-1(ಇ) ಎಂದು, ಪ್ರತಿವಾದಿ-4 ರವರ ಸಹಿಯನ್ನು ನೋಡಿ ಗುರುತಿಸಿದ್ದು ಅದನ್ನು ನಿಪಿ-1(ಎಫ್) ಎಂದು, ಪ್ರತಿವಾದಿ-5 ರವರ ಸಹಿಯನ್ನು ನೋಡಿ ಗುರುತಿಸಿದ್ದು ಅದನ್ನು ನಿಪಿ-1(ಜಿ) ಎಂದು, ದಾವಾ ಆಸ್ತಿಗೆ ಸಂಬಂಧಪಟ್ಟ 2020-21 ನೇ ಸಾಲಿನ ಪಹಣಿಯನ್ನು ಹಾಜರು ಮಾಡಿದ್ದು ಅದನ್ನು ನಿಪಿ-2 ಎಂದು, ದಿನಾಂಕಃ06.05.2022 ರಂದು ಅದ ದಾನಪತ್ರದ ದೃಢೀಕೃತ ನಕಲನ್ನು

ಹಾಜರು ಮಾಡಿದ್ದು ಅದನ್ನು ನಿಪಿ-3 ಎಂದು, ದಿನಾಂಕ:09.05.2022 ರಂದು ತಮ್ಮ ವಕೀಲರ ಮೂಲಕ ನೀಡಿದ ನೋಟೀಸಿನ ಕಛೇರಿ ಪ್ರತಿಯನ್ನು ಹಾಜರು ಮಾಡಿದ್ದು ಅದನ್ನು ನಿಪಿ-4 ಎಂದು, ನೋಟೀಸು ಕಳುಹಿಸಿದ ಬಗ್ಗೆ 6 ಅಂಚೆ ರಶೀದಿಗಳನ್ನು ಹಾಜರು ಮಾಡಿದ್ದು ಅವುಗಳನ್ನು ಒಟ್ಟಾಗಿ ನಿಪಿ-5 ಎಂದು, ಜಾರಿಯಾಗದೇ ಹಿಂದಿರುಗಿದ 5 ಅಂಚೆ ಲಕೋಟೆಗಳನ್ನು ಹಾಜರು ಮಾಡಿದ್ದು ಅವುಗಳನ್ನು ಕ್ರಮವಾಗಿ ನಿಪಿ-6 ರಿಂದ ನಿಪಿ-10 ಎಂದು, 1 ಅಂಚೆ ಕಛೇರಿಯವರು ನೀಡಿದ ಹಿಂಬರಹವನ್ನು ಹಾಜರು ಮಾಡಿದ್ದು ಅದನ್ನು ನಿಪಿ-11 ಎಂದು ಗುರುತಿಸಲಾಯಿತು.

ಮುಂದುವರೆದ ಮುಖ್ಯ ವಿಚಾರಣೆಯನ್ನು ಕೋರಿಕೆಯ ಮೇರೆಗೆ ಮುಂದೂಡಲಾಯಿತು.

(ಸಾಕ್ಷಿಯು ಕೊಟ್ಟ ಸಾಕ್ಷ್ಯವನ್ನು ಬಹಿರಂಗ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನಕ್ಕೆ ಗಣಕೀಕರಿಸಿದೆ)

(ಸಾಕ್ಷಿಗೆ ಸಾಕ್ಷ್ಯವನ್ನು ಓದಿ ಹೇಳಲಾಗಿ ಕೇಳಿ ಸರಿ ಇದೆ ಎಂದು ಒಪ್ಪಿದ್ದಾರೆ)

(ಮಹೇಶ್ ಬಿ.ಟಿ)
1 ನೇ ಅಪರ ಹಿರಿಯ ಸಿವಿಲ್ ನ್ಯಾಯಾಧೀಶರು,
ರಾಮನಗರ.